ಜೆಎಸ್‌ಎಸ್ ಮಹಿಳಾ ಕಾಲೇಜು, ಕೊಳ್ಳೇಗಾಲ

ದಿನಾಂಕ : 23–01–2018

ಪ್ರಕಟಣೆಯ ಕೃಪೆಗಾಗಿ

**ಚುನಾವಣೆ ಎಂದರೆ ಅಧಿಕಾರಕ್ಕಾಗಿ ನಡೆಯುವ ಹೋರಾಟವಾಗಿದೆ – ಪ್ರೊ. ಉಮೇಶ**

**ಜೆಎಸ್‌ಎಸ್ ಪದವಿ ವಿದ್ಯಾರ್ಥಿಗಳಿಂದ ಮತದಾನ ಜಾಗೃತಿ ಜಾಥಾ**

ಕೊಳ್ಳೇಗಾಲ 23–01–2018 : ಚುನಾವಣೆ ಎಂದರೆ ಅಧಿಕಾರಕ್ಕಾಗಿ ನಡೆಯುವ ಹೋರಾಟ ಎಂದೇ ಬಿಂಬಿತವಾಗಿದೆ. ನಮ್ಮ ದೇಶದಲ್ಲಿ, ಈ ಹೋರಾಟಕ್ಕೆ ತಗಲುವ ವೆಚ್ಚ ಯುದ್ಧದ ಖರ್ಚಿಗಿಂತ ಕಡಿಮೆಯೇನಿಲ್ಲ ಎಂದು ಪ್ರಾಚಾರ್ಯ ಪ್ರೊ ಉಮೇಶ ಅಭಿಪ್ರಾಯಿಸಿದರು.

ಇಲ್ಲಿನ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ‘‘ರಾಷ್ಟ್ರೀಯ ಮತದಾರರ ದಿನಾಚರಣೆ’’ ಅಂಗವಾಗಿ ಆಯೋಜಿಸಿದ್ದ ‘‘ಮತದಾನ ಜಾಗೃತಿ ಜಾಥಾ’’ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಜಗತ್ತಿನ ಅಭಿವೃದ್ಧಿ ಹೊಂದುತ್ತಿರುವ ರಾಷ್ಟ್ರಗಳಲ್ಲಿ ನಮ್ಮ ಪ್ರಜಾಪ್ರಭುತ್ವವು ಅತ್ಯುತ್ತಮವಾದದ್ದು ಎನ್ನುವುದರಲ್ಲಿ ಯಾವುದೇ ಸಂದೇಹವಿಲ್ಲ. ನೆರೆಯ ರಾಷ್ಟ್ರ ಚೀನಾದ ಜನತೆಗೆ ಇಲ್ಲದ ಅಭಿವ್ಯಕ್ತಿ ಸ್ವಾತಂತ್ರ್ಯ, ಜನಪ್ರತಿನಿಧಿಗಳ ಆಯ್ಕೆಯ ಸ್ವಾತಂತ್ರ್ಯವನ್ನು ನಾವು ಹೊಂದಿದ್ದೇವೆ. ಅಭಿವೃದ್ಧಿ ಹೊಂದಿದ ರಾಷ್ಟ್ರಗಳ ಸಾಲಿನಲ್ಲಿ ನಮ್ಮ ಭಾರತವನ್ನು ಕಾಣಬೇಕಾದರೆ ಪ್ರಜಾಪ್ರಭುತ್ವ ವ್ಯವಸ್ಥೆ ಸುಧಾರಣೆಯಾಗಬೇಕು. ಇದು ಮತದಾರರು ಆಯ್ಕೆ ಮಾಡುವ ಅಭ್ಯರ್ಥಿಗಳ ಸಾಮರ್ಥ್ಯ, ದೇಶಾಭಿಮಾನ, ರಾಷ್ಟ್ರದ ಜನತೆಯ ಬಗ್ಗೆ ಕಾಳಜಿ, ಇತ್ಯಾದಿಗಳನ್ನು ಅವಲಂಬಿಸಿರುತ್ತದೆ. ಆದ್ದರಿಂದ ಪ್ರತಿಯೊಬ್ಬ ಮಾತದಾರ ಮತದಾನ ಮಾಡುವಂತೆ, ಮತದಾನ ಮಾಡುವ ಮೂಲಕ ಸುಬಧ್ರ ದೇಶವನ್ನು ಕಟ್ಟುವಂತೆ, ಇತರರನ್ನು ಪ್ರೇರೇಪಿಸುವಂತೆ ಇಂತಹ ಕಾರ್ಯಕ್ರಮಗಳಲ್ಲಿ ಸಕ್ರಿಯ ಪಾತ್ರ ವಹಿಸುವಂತೆ ಕರೆ ನೀಡಿದರು.

ಅಧ್ಯಾಪಕರು ಹಾಗೂ ವಿದ್ಯಾರ್ಥಿನಿಯರು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಜಾಗೃತಿ ಜಾಥಾ ನಡೆಸಿಕೊಟ್ಟರು.

“ರಾಷ್ಟ್ರೀಯ ಮತದಾರರ ದಿನಾಚರಣೆ” ಅಂಗವಾಗಿ ಆಯೋಜಿಸಿದ್ದ “ಮತದಾನ ಜಾಗೃತಿ ಜಾಥಾ” ಕಾರ್ಯಕ್ರಮ ಪ್ರಾಚಾರ್ಯ ಪ್ರೊ. ಉಮೇಶರವರು ಚಾಲನೆ ನೀಡುತ್ತಿರುವುದು. ಚಿತ್ರದಲ್ಲಿ ಅಧ್ಯಾಪಕರು ಹಾಗೂ ವಿದ್ಯಾರ್ಥಿನಿಯರುಗಳನ್ನು ಕಾಣಬಹುದು.




ಅಧ್ಯಾಪಕರು ಹಾಗೂ ವಿದ್ಯಾರ್ಥಿನಿಯರುಗಳಿಂದ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಜಾಗೃತಿ ಜಾಥಾ



ಅಧ್ಯಾಪಕರು ಮತ್ತು ವಿದ್ಯಾರ್ಥಿನಿಯರುಗಳಿಂದ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಜಾಗೃತಿ ಜಾಥಾ

